ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ

223 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಬಾಲ್ಕಿ)

ಜಿ. ಜನಾರ್ಧನ ರೆಡ್ಡಿ(ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು)

ಅ) ಭಾಲ್ಕಿ ವಿಧಾನ ಸಭಾ ಕ್ಷೇತ್ರದ ಯಾವ ಯಾವ ಸ್ಥಳಗಳನ್ನು ಪ್ರವಾಸಿ ತಾಣಗಳೆಂದು ಗುರುತಿಸಲಾಗಿದೆ;

ಭಾಲ್ಕಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕಾರಂಜ ಜಲಾಶಯವನ್ನು ಪ್ರವಾಸಿ ತಾಣವೆಂದು ಗುರುತಿಸಲಾಗಿದೆ.

ಆ) ಈ ತಾಣಗಳ ಅಭಿವೃದ್ಧಿಗಾಗಿ ಸರ್ಕಾರವು ಕಳೆದ 3 ವರ್ಷಗಳ ಅವಧಿಯಲ್ಲಿ ಖರ್ಚು ಮಾಡಿರುವ ಹಣವೆಷ್ಟು;

ಕಳೆದ ಮೂರು ವರ್ಷಗಳಲ್ಲಿ ಇದರ ಅಭಿವೃದ್ಧಿಗಾಗಿ ಯಾವುದೇ ಹಣವನ್ನು ವೆಚ್ಚ ಮಾಡಿರುವುದಿಲ್ಲ.

ಇ) ಈ ತಾಣಗಳಿಗೆ ಭೇಟಿ ನೀಡುತ್ತಿರುವ ಪ್ರವಾಸಿಗರಿಗೆ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರದ ಮುಂದಿರುವ ಕ್ರಮಗಳೇನು?

ಸದರಿ ಸ್ಥಳವನ್ನು ಒಳಿದು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ಕೇಂದ್ರ ಧನಸಹಾಯದ ಅಡಿಯಲ್ಲಿ ಕಾರಂಜ ಜಲಾಶಯ ಪ್ರದೇಶದಲ್ಲಿ ಕಾಲಪಥ ನಿರ್ಮಾಣ, ಲ್ಯಾಂಡ್ ಸ್ಕೇಪಿಂಗ್, ಉದ್ಯಾನವನ, ಮನೋರಂಜನ ಸೌಲಭ್ಯ, ಆಸನ ವ್ಯವಸ್ಥೆ, ಶೌಚಾಲಯ ಹಾಗೂ ಪಾರ್ಕಿಂಗ್ ಸೌಲಭ್ಯ ಇತ್ಯಾದಿ ಸೌಲಭ್ಯಗಳನ್ನು ಅಳವಡಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ. ಸದರಿ ಯೋಜನೆಗಳ ಅನುಷ್ಟಾನಕ್ಕಾಗಿ ಅಗತ್ಯವಾದ ಜಮೀನನ್ನು ಒದಗಿಸುವಂತೆ ನೀರಾವರಿ ಇಲಾಖೆಯನ್ನು ಕೋರಲಾಗಿದೆ.

ಈ) ಈ ತಾಣಗಳಲ್ಲಿ ಪ್ರವಾಸಿಗರಿಗೆ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ?

ನಿವೇಶನದ ಕೊರತೆಯಿಂದಾಗಿ ಯಾವುದೇ ಸೌಲಭ್ಯಗಳನ್ನು ಇದುವರೆಗೂ ಕಲ್ಪಿಸಲಾಗಿರುವುದಿಲ್ಲ.